JANUARY 03, 2025

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು

<><><>

- ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ಪ್ರಸ್ತಾವ; ಸಚಿವ ಸಂಪುಟ ಸಭೆ ಅನುಮೋದನೆ.
- ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು, ಬೆಂಗಳೂರಿನ ನಿಮ್ಹಾನ್ಸ್ ಹಾಗೂ ಬೆಳಗಾವಿಯ ಕೆ.ಎಲ್.ಇ. ಸಂಸ್ಥೆಯ ಕಾರ್ಯಕ್ರಮಗಳಲ್ಲಿ, ಭಾಗಿ.
- ಕೇರಳ ಮತ್ತು ಕರ್ನಾಟಕ ಹಾಗೂ ಬಂಡೀಪುರ ಮತ್ತು ವಯನಾಡ ಮಧ್ಯೆ, ರಾತ್ರಿ 9 ಗಂಟೆಯ ವರೆಗೆ ಸಂಚಾರಕ್ಕೆ ಅವಕಾಶ.
- ಫೆಬ್ರವರಿ 28 ರಿಂದ, ಮೂರು ದಿನಗಳ ಕಾಲ, ಹಂಪಿ ಉತ್ಸವ.

<><><>

ಈಗ ವಾರ್ತೆಗಳ ವಿವರ

<><><>

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯನ್ನು ವಿಭಜಿಸಿ, ಧಾರವಾಡ ಮಹಾನಗರ ಪಾಲಿಕೆಯನ್ನು ಪ್ರತ್ಯೇಕವಾಗಿ ರೂಪಿಸುವ ಪ್ರಸ್ತಾವಕ್ಕೆ, ರಾಜ್ಯ ಸಚಿವ ಸಂಪುಟ ತನ್ನ ತಾತ್ವಿಕ ಒಪ್ಪಿಗೆ ಸೂಚಿಸಿದೆ. ಬೆಂಗಳೂರಿನಲ್ಲಿ ಸಚಿವ ಸಂಪುಟ ಸಭೆಯ ಬಳಿಕ, ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು.

ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರ ಕಲಂ 3ರಲ್ಲಿ ನಿಗದಿಪಡಿಸಿರುವ ಮಾನದಂಡಗಳನ್ನು, ಪ್ರಸ್ತಾವ ಪೂರೈಸುವ ಕಾರಣದಿಂದ, ಪ್ರಸ್ತುತ ಹುಬ್ಬಳ್ಳಿ–ಧಾರವಾಡಕ್ಕೆ, ಎರಡು ಪ್ರತ್ಯೇಕ ಮಹಾನಗರ ಪಾಲಿಕೆಗಳನ್ನು, ಆಡಳಿತಾತ್ಮಕ ದೃಷ್ಟಿಯಿಂದ ಹೊಂದಲು, ಸಂಪುಟ ಸಭೆ ತೀರ್ಮಾನಿಸಿದೆ; 26 ವಾರ್ಡ್‌ಗಳನ್ನು ಧಾರವಾಡಕ್ಕೆ, 56 ವಾರ್ಡ್‌ಗಳನ್ನು ಹುಬ್ಬಳ್ಳಿ ಪಾಲಿಕೆ ವ್ಯಾಪ್ತಿಗೆ ಸೇರಿಸಲಾಗಿದೆ ಎಂದರು.

<><><>

ಎಚ್.ಕೆ. ಪಾಟೀಲ ಧ್ವನಿ 50 ಸೆಕೆಂದುಗಳು

<><><>

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ 2022–23ರ ಅನುದಾನದಲ್ಲಿ, 5 ಸಾವಿರದ 692 ಲಕ್ಷ 50 ಸಾವಿರ ರೂಪಾಯಿ ಬಳಸಿ, ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ವಸತಿ ಶಾಲೆ ಹಾಗೂ ವಸತಿ ನಿಲಯಗಳಿಗೆ, ವಿವಿಧ ಸಾಮಗ್ರಿ ಪೂರೈಸಲು ಸಚಿವ ಸಂಪುಟ ಅನುಮೋದಿಸಿದೆ ಎಂದು ಸಚಿವರು ಹೇಳಿದರು.

<><><>

ಡೀಸೆಲ್ ದರ ಏರಿಕೆ ಹಾಗೂ ನಿರ್ವಹಣಾ ವೆಚ್ಚ ಸರಿದೂಗಿಸುವ ಸಲುವಾಗಿ, ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿ, ಪ್ರಯಾಣ ದರವನ್ನು ಶೇಕಡ 15ರಷ್ಟು ಹೆಚ್ಚಿಸಲಾಗಿದೆ ಎಂದು, ಸಾರಿಗೆ ಖಾತೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಇಂದು ಬೆಳಗ್ಗೆ ಬೆಂಗಳೂರಿನ ನಿಮ್ಹಾನ್ಸ್‌ನ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಲಿದ್ದಾರೆ. ನಂತರ ಬೆಳಗಾವಿಗೆ ಭೇಟಿ ನೀಡಲಿದ್ದು, ಕೆ.ಎಲ್.ಇ. ಸಂಸ್ಥೆಯಲ್ಲಿ, ಅತ್ಯಾಧುನಿಕ ತಂತ್ರಜ್ಞಾನ ವ್ಯವಸ್ಥೆಯೊಂದಿಗೆ ನಿರ್ಮಾಣಗೊಂಡ, 300 ಕೋಟಿ ರೂಪಾಯಿ ವೆಚ್ಚದ, ಡಾಕ್ಟರ್ ಸಂಪತ್‌ಕುಮಾರ ಹಾಗೂ ವಿದ್ಯಾ ಶಿವಣಗಿ ಕ್ಯಾನ್ಸರ್ ಚಿಕಿತ್ಸಾ ಆಸ್ಪತ್ರೆಯನ್ನು ಉದ್ಘಾಟಿಸಲಿದ್ದಾರೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಜೆ.ಪಿ. ನಡ್ಡಾ, ಜ್ಯೋತಿರಾದಿತ್ಯ ಸಿಂಧಿಯಾ ಸೇರಿದಂತೆ, ರಾಜ್ಯದ ಸಚಿವರುಗಳಾದ ಶರಣಪ್ರಕಾಶ ಪಾಟೀಲ, ಸತೀಶ ಜಾರಕಿಹೊಳಿ, ಸಂಸದ ಜಗದೀಶ ಶೆಟ್ಟರ್, ಮತ್ತಿತರರು ಭಾಗವಹಿಸಲಿದ್ದಾರೆ.

<><><>

'ನಿಮ್ಮ ಸೈನ್ಯದ ಬಗ್ಗೆ ಅರಿಯಿರಿ' ಮೇಳ–2025, ಇಂದಿನಿಂದ 3 ದಿನಗಳ ಕಾಲ, ಭಾರತೀಯ ಸೇನೆ, ಹೈದರಾಬಾದಿನ ಗೋಲ್ಕೊಂಡಾ ಕೋಟೆಯಲ್ಲಿ ಆಯೋಜಿಸಿದೆ. ಶ್ರೀಸಾಮಾನ್ಯರು ಹಾಗೂ ಸೇನೆಯ ಮಧ್ಯದ ಕಂದರವನ್ನು ಬೆಸೆಯುವುದು, ಭಾರತೀಯ ಸೇನೆಯ ಅತ್ಯಾಧುನಿಕ ತಾಂತ್ರಿಕ ಕ್ಷಮತೆ ಹಾಗೂ ಕಾರ್ಯ ಸನ್ನದ್ಧತೆ ಬಗ್ಗೆ ಸಮಗ್ರ ಮಾಹಿತಿ ನೀಡಲು, ಹೈದರಾಬಾದಿನ ಆರ್ಟಿಲರಿ ಸೆಂಟರ್ ಈ ಮೇಳವನ್ನು ಸಂಯೋಜಿಸಿದೆ.

ಜನವರಿ 26ರ ಗಣರಾಜ್ಯೋತ್ಸವದ ನಿಮಿತ್ತ, ಹೊಸ ದಿಲ್ಲಿಯ ಕರ್ತವ್ಯ ಪಥದ ವೈಭವಯುತ ಕವಾಯತಿನ ಹಿನ್ನೆಲೆ, ಈ ಮೇಳವನ್ನು ಸಾರ್ವಜನಿಕರ ಮಾಹಿತಿಗಾಗಿ, ಆಯೋಜಿಸಲಾಗಿದೆ.

<><><>

ವಿದ್ಯಾರ್ಥಿಯ ಸಂಪೂರ್ಣ ವಿವರವುಳ್ಳ, 'ಅಪಾರ್' ಯುನಿಕ್ ಗುರುತಿನ ಚೀಟಿ ಪಡೆಯಲು ಹಾಗೂ ಇತರೆ ಸೇವೆ, ಸೌಲಭ್ಯ ಪಡೆಯಲು, ವಿದ್ಯಾರ್ಥಿಗಳ ಆಧಾರ್ ಏಕರೂಪತೆ ಅತ್ಯವಶ್ಯಕ; ಹೀಗಾಗಿ, ಆಧಾರ್ ತಿದ್ದುಪಡಿ ಆಂದೋಲನವನ್ನು ಶಿವಮೊಗ್ಗ ಜಿಲ್ಲೆಯಾದ್ಯಂತ ಆಯೋಜಿಸಲಾಗಿದೆ ಎಂದು, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಹೇಮಂತ್ ಎನ್. ತಿಳಿಸಿದ್ದಾರೆ. ಶಿವಮೊಗ್ಗ ತಾಲೂಕು, ಕಾಚಿನಕಟ್ಟೆಯ ಸರ್ಕಾರಿ ಪ್ರೌಢ ಶಾಲೆಯಲ್ಲಿ, ಶಾಲಾ ವಿದ್ಯಾರ್ಥಿಗಳ ಆಧಾರ್ ತಿದ್ದುಪಡಿ ಆಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ತಾಲೂಕಿನ 16 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳ ಅಧಾರ್ ಮಾಹಿತಿಯ ತಿದ್ದುಪಡಿ ಅಗತ್ಯವಿದೆ, ಎಂದರು. ಕೇಂದ್ರ ಸರ್ಕಾರ ವಿದ್ಯಾರ್ಥಿಗಳ ಎಲ್ಲ ವಿವರಗಳುಳ್ಳ ಯುನಿಕ್ ಗುರುತಿನ ಚೀಟಿಯಾದ 'ಅಪಾರ್' ನ್ನು ನೀಡುತ್ತಿದೆ. ಇದರಲ್ಲಿ ವಿದ್ಯಾರ್ಥಿಗಳ ಸಕಲ ಮಾಹಿತಿ ಲಭ್ಯವಾಗಲಿದೆ. ಮಕ್ಕಳು ಉನ್ನತ ಶಿಕ್ಷಣಕ್ಕಾಗಿ ಬೇರೆ ಜಿಲ್ಲೆ, ಬೇರೆ ಶಿಕ್ಷಣ ಸಂಸ್ಥೆಗಳಿಗೆ ದಾಖಲಾಗುವ ಸಂದರ್ಭ ಒದಗಿ ಬಂದಾಗ ಈ ಅಪಾರ್ ಕಾರ್ಡ್ ಅನುಕೂಲವಾಗುತ್ತದೆ ಎಂದರು.

<><><>

ಆಧಾರ್ ತಿದ್ದುಪಡಿಗೆ 100 ರೂಪಾಯಿ ಮತ್ತು ಅಪ್‌ಡೇಟ್ ಮಾಡಲು 50 ರೂಪಾಯಿ ಶುಲ್ಕ ನಿಗದಿ ಪಡಿಸಲಾಗಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ x ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ವನ್ಯಜೀವಿಗಳಿಗೆ ಹಾನಿಯಾಗದಂತೆ, ಅರಣ್ಯ ಪ್ರದೇಶಗಳಲ್ಲಿ ಅಂತರ್ಗತ ವಿದ್ಯುತ್ ಕೇಬಲ್ ಅಳವಡಿಸಲು ಸೂಚಿಸಲಾಗಿದೆ ಎಂದು, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಸಚಿವರು, ಅರಣ್ಯ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದರು. ಕೇರಳ ಮತ್ತು ಕರ್ನಾಟಕ ಹಾಗೂ ಬಂಡೀಪುರ ಮತ್ತು ವಯನಾಡ ನಡುವೆ ರಾತ್ರಿ 9 ಗಂಟೆಯ ವರೆಗೆ ಸಂಚಾರಕ್ಕೆ ಅವಕಾಶ ನೀಡಲಾಗಿದೆ. ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.

<><><>

ಪರಿಹಾರಾತ್ಮಕ ಅರಣ್ಯೀಕರಣ ನೀತಿ ನಿರ್ವಹಣೆ ಮತ್ತು ಯೋಜನಾ ಪ್ರಾಧಿಕಾರ–ಕ್ಯಾಂಪಾ ಹಣವನ್ನು ಬಿಡುಗಡೆ ಮಾಡುವಂತೆ, ದಕ್ಷಿಣ ರಾಜ್ಯಗಳ ಅರಣ್ಯ ಸಚಿವರ ನಿಯೋಗ, ಕೇಂದ್ರ ಪರಿಸರ ಖಾತೆ ಸಚಿವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಲಿದೆ ಎಂದು, ಸಚಿವ ಖಂಡ್ರೆ ನುಡಿದರು.

<><><>

ವಿಶ್ವ ವಿಖ್ಯಾತ ಹಂಪಿ ಉತ್ಸವ, ಫೆಬ್ರವರಿ 28 ರಿಂದ ಮೂರು ದಿನಗಳ ಕಾಲ ಆಯೋಜಿಸಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಮ್ಮತಿಸಿದ್ದಾರೆ ಎಂದು, ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಬಿ. ಝೆಡ್. ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಮುಖ್ಯಮಂತ್ರಿಯವರೊಂದಿಗೆ ಸಮಾಲೋಚಿಸಿ, ಸಚಿವರು ಈ ವಿಷಯವನ್ನು ಪ್ರಕಟಿಸಿದ್ದಾರೆ. ಫೆಬ್ರವರಿ 28ರಂದು ಮುಖ್ಯಮಂತ್ರಿಯವರು, ಹಂಪಿ ಉತ್ಸವ ಉದ್ಘಾಟಿಸಲಿದ್ದಾರೆ. ಮಾರ್ಚ್ 1 ಮತ್ತು 2 ರಂದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ನಡೆಯಲಿವೆ. ಜಿಲ್ಲಾಧಿಕಾರಿ ಎಮ್. ಎಸ್. ದಿವಾಕರ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲಿದ್ದಾರೆ ಎಂದು, ಸಚಿವ ಜಮೀರ್ ಅಹ್ಮದ್ ಖಾನ್, ಮಾಹಿತಿ ನೀಡಿದ್ದಾರೆ.

<><><>

'ಪ್ರಧಾನಮಂತ್ರಿ ಸೂರ್ಯ ಘರ್, ಮುಫ್ತ್ ಬಿಜಲಿ ಯೋಜನೆ' ಜಗತ್ತಿನಲ್ಲಿಯೇ ಅತೀ ದೊಡ್ಡ ಯೋಜನೆಯಾಗಿದೆ ಎಂದು, ಕೇಂದ್ರದ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಮಂಗಳೂರಿನಲ್ಲಿ, ಪ್ರಧಾನಮಂತ್ರಿ ಸೂರ್ಯ ಘರ್ ಮುಫ್ತ್ ಬಿಜಲಿ ಯೋಜನೆಯ ಮಾಹಿತಿ ಕಾರ್ಯಾಗಾರವನ್ನು ಉದ್ಘಾಟಿಸಿ, ಸಂವಾದ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು. ಸೌರ ವಿದ್ಯುತ್ ಉತ್ಪಾದನೆ ಕಾರ್ಯವನ್ನು ಸ್ವತಃ ಕೈಗೊಂಡು, ಸ್ವಾವಲಂಬಿಯಾಗಬಹುದು. ಉಳಿಕೆ ವಿದ್ಯುತ್‌ನ್ನು ಗ್ರಿಡ್‌ಗೆ ಮಾರಾಟ ಮಾಡಬಹುದು. ಈ ಯೋಜನೆಯ ಸದುಪಯೋಗವನ್ನು ಪ್ರತಿಯೊಬ್ಬರೂ ಪಡೆಯಬೇಕು ಎಂದು, ಸಚಿವ ಜೋಶಿ ಕೋರಿದರು.

<><><>

ವಿಜಯನಗರ ಜಿಲ್ಲೆಯಲ್ಲಿ, ಮೊಟ್ಟ ಮೊದಲ ಬಾರಿಗೆ, ಹಗರಿಬೊಮ್ಮನಹಳ್ಳಿ ತಾಲೂಕಿನ, ಬ್ಯಾಸಿಗಿದೇರಿ ಗ್ರಾಮದಲ್ಲಿ, ಕೃಷ್ಣಮೂರ್ತಿ ಮತ್ತು ವಿಶಾಲಾಕ್ಷಮ್ಮ ದಂಪತಿ, ತಮ್ಮ 6 ಎಕರೆ ಜಮೀನಿನಲ್ಲಿ, ಬಹು ಬೇಡಿಕೆಯ ನೋನಿ ಹಣ್ಣು ಬೆಳೆದಿದ್ದಾರೆ. ಬೀಟ್ರೂಟ್, ಪೇರಲ, ವಾಟರ್ ಆಪಲ್, ಚಕ್ಕೆ, ಲವಂಗ ಮತ್ತು ಏಲಕ್ಕಿಯಂತಹ ತೋಟಗಾರಿಕಾ ಬೆಳೆಗಳನ್ನು ಸಹ, ಅವರು ಬೆಳೆಯುತ್ತಿದ್ದಾರೆ. ಪ್ರಯೋಗಶೀಲ ಕೃಷಿಕ ಕೃಷ್ಣಮೂರ್ತಿಯವರು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ತೋಟಿಗ ಕೃಷ್ಣಮೂರ್ತಿ ಧ್ವನಿ 30 ಸೆಕೆಂದುಗಳು

<><><>

ಸಾವಯವ ಕೃಷಿಕ ಹಾಗೂ ಗ್ರಾಹಕ ಬಳಗದಿಂದ, ಮಂಗಳೂರಿನಲ್ಲಿ ನಾಳೆ ಹಾಗೂ ನಾಡಿದ್ದು, ಅಂತಾರಾಜ್ಯ ಗೆಡ್ಡೆ, ಗೆಣಸು ಮತ್ತು ಸೊಪ್ಪಿನ ಮೇಳ ಆಯೋಜಿಸಲಾಗಿದೆ ಎಂದು, ಸಾವಯವ ಬಳಗದ ಕಾರ್ಯಾಧ್ಯಕ್ಷ ಜಿ.ಆರ್. ಪ್ರಸಾದ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, 350 ಕ್ಕೂ ಹೆಚ್ಚು ವಿಧದ ಗೆಡ್ಡೆ ಗೆಣಸು ಹಾಗೂ 150ಕ್ಕೂ ಹೆಚ್ಚು ವಿಧದ ಸೊಪ್ಪುಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ, ಎಂದರು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಕೇಂದ್ರ ಜಲ ಮಂತ್ರಾಲಯ ಅಧೀನದ, ನೀತಿ ಆಯೋಗದ ರಾಷ್ಟ್ರೀಯ ಕಾರ್ಯಪಡೆ ಸಮಿತಿ ಸದಸ್ಯರಾಗಿ, ಧಾರವಾಡ ಜಲ ಮತ್ತು ನೆಲ ನಿರ್ವಹಣೆ ವಾಲ್ಮಿ ಸಂಸ್ಥೆ ನಿರ್ದೇಶಕ, ರಾಜೇಂದ್ರ ಪೋದ್ದಾರ ನೇಮಕಗೊಂಡಿದ್ದಾರೆ.

<><><>

ಹಾಸನಕ್ಕೆ ಆಹಾರ ಆಯೋಗದ ಅಧ್ಯಕ್ಷ ಎಚ್. ಕೃಷ್ಣ ನೇತೃತ್ವದ ತಂಡ ಭೇಟಿ ನೀಡಿ, ಪರಿಶೀಲಿಸಿತು.

<><><>

ಗದಗ ಜಿಲ್ಲೆ, ನಾಗಾವಿಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ, ಇಂದು ಮತ್ತು ನಾಳೆ, 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನ ಆಯೋಜಿತವಾಗಿದೆ.

<><><>

ಮೈಸೂರು ಆಡಳಿತ ತರಬೇತಿ ಸಂಸ್ಥೆಯ, ವಿಕೋಪ ನಿರ್ವಹಣಾ ಕೇಂದ್ರದ ಪರಮೇಶ ಜೆ.ಆರ್., ಪ್ರಾಕೃತಿಕ ವಿಕೋಪ ಸಂದರ್ಭದ ಮುಂಜಾಗ್ರತಾ ಕ್ರಮಗಳ ಕುರಿತು, ಮಡಿಕೇರಿಯಲ್ಲಿ ಕಾರ್ಯಾಗಾರ ನಡೆಸಿದರು.

<><><>

ವಿಜಯಪುರ–ಮಂಗಳೂರು ಮಧ್ಯೆ ಸಂಚರಿಸುವ, ಮಂಗಳೂರು ಎಕ್ಸ್‌ಪ್ರೆಸ್ ರೈಲನ್ನು, ಯಲವಿಗಿಯಲ್ಲಿ ನಿಲುಗಡೆಗೆ ಅವಕಾಶ ಕಲ್ಪಿಸಲಾಗಿದೆ.

<><><>

ರಾಜ್ಯ ಸರ್ಕಾರ ಮತ್ತು ಪೊಲೀಸ್ ಇಲಾಖೆ, ನಕ್ಸಲರ ಶರಣಾಗತಿಗೆ ಆದ್ಯತೆ ನೀಡಿ, ಪ್ಯಾಕೇಜ್ ಪ್ರಕಟಿಸಿದೆ ಎಂದು, ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ.

<><><>

ಬೆಂಗಳೂರಿನಲ್ಲಿ, ಪ್ರತಿ 2 ವರ್ಷಕ್ಕೊಮ್ಮೆ ಆಯೋಜಿಸಲಾಗುವ, ವೈಮಾನಿಕ ಪ್ರದರ್ಶನ, 'ಏರೋ ಇಂಡಿಯಾ 2025' ಈ ಬಾರಿ ಫೆಬ್ರವರಿ 10 ರಿಂದ 14ರ ವರೆಗೆ, ಯಲಹಂಕ ವಾಯು ನೆಲೆಯಲ್ಲಿ, ಐದು ದಿನಗಳ ಕಾಲ ನಡೆಯಲಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಧಾರವಾಡಕ್ಕೆ ಪ್ರತ್ಯೇಕ ಮಹಾನಗರ ಪಾಲಿಕೆ ಪ್ರಸ್ತಾವ; ಸಚಿವ ಸಂಪುಟ ಸಭೆ ಅನುಮೋದನೆ.
- ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು, ಬೆಂಗಳೂರಿನ ನಿಮ್ಹಾನ್ಸ್ ಹಾಗೂ ಬೆಳಗಾವಿಯ ಕೆ.ಎಲ್.ಇ. ಕಾರ್ಯಕ್ರಮಗಳಲ್ಲಿ, ಭಾಗಿ.
- ಕೇರಳ ಮತ್ತು ಕರ್ನಾಟಕ ಹಾಗೂ ಬಂಡೀಪುರ ಮತ್ತು ವಯನಾಡ ಮಧ್ಯೆ, ರಾತ್ರಿ 9 ಗಂಟೆಯ ವರೆಗೆ ಸಂಚಾರಕ್ಕೆ ಅವಕಾಶ.
- ಫೆಬ್ರವರಿ 28 ರಿಂದ, ಮೂರು ದಿನಗಳ ಕಾಲ, ಹಂಪಿ ಉತ್ಸವ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>